**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಮೊಳಕಾಲ್ಮೂರು .</u>**

**<u>ಸಿ.ಸಿ. ನಂ. 1492/2025</u>**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | | ನಾಯಕಣ್ಣ | ಸಿ.ಡಬ್ಲ್ಯೂ – 1 |
| ತಂದೆ/ ಗಂಡನ ಹೆಸರು | | ಗೊಲ್ಲಯ್ಯ | ಪಿ.ಡಬ್ಲ್ಯೂ – 1 |
| ವಯಸ್ಸು | : | 63 ವರ್ಷ | |
| ಉದ್ಯೋಗ | | ಕೂಲಿ ಕೆಲಸ | |
| ವಾಸಸ್ಥಳ | : | ಮಾರಮ್ಮನಹಳ್ಳಿ | ದಿಃ 29-07-2026. |

**<u>ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ</u>**

ನ್ಯಾಯಾಲಯದ ಮುಂದೆ ಇರುವ ಆರೋಪಿ ನನ್ನ ಅಳಿಯ. ಆರೋಪಿ ನನ್ನೊಂದಿಗೆ ಗಲಾಟೆ ಮಾಡಿರುವುದಿಲ್ಲ. ನನ್ನನ್ನು ಮುಂದಕ್ಕೆ ಹೋಗದಂತೆ ಎಂದಿಗೂ ತಡೆದು ನಿಲ್ಲಿಸಿರುವುದಿಲ್ಲ. ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ. ಕೈಯಿಂದಾಗಲೀ ಅಥವಾ ಯಾವುದೇ ವಸ್ತುವಿನಿಂದಾಗಲೀ ನನಗೆ ಹೊಡೆದಿರುವುದಿಲ್ಲ. ನನಗೆ ಯಾವುದೇ ಸಾಮಾನ್ಯ ಸ್ವರೂಪದ ಗಾಯ ಆಗಿರುವುದಿಲ್ಲ. ಈ ಬಗ್ಗೆ ನಾನು ಯಾವುದೇ ಚಿಕಿತ್ಸೆ ಪಡೆದಿರುವುದಿಲ್ಲ. ಆರೋಪಿ ವಿರುದ್ಧ ನಾನು ಯಾವುದೇ ದೂರನ್ನು ನೀಡಿರುವುದಿಲ್ಲ.

ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದೂರನ್ನು ನಿಪಿ 1 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಹೀಗೆ 1 ವರ್ಷದ ಹಿಂದೆ ನಿಪಿ 1 ಕ್ಕೆ ಸಹಿ ಮಾಡಿರುತ್ತೇನೆ. ಎಲ್ಲಿ ಸಹಿ ಮಾಡಿರುತ್ತೇನೆ ಎಂದು ಹೇಳಲು ನೆನಪಿಲ್ಲ.

ಸಾಕ್ಷಿಗೆ ಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಕಚ್ಚಾ ನಕಾಶೆಯನ್ನು ತೋರಿಸಲಾಗಿ

ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಕಚ್ಚಾ ನಕಾಶೆಯನ್ನು ನಿಪಿ 3 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು ಗುರುತಿಸಲಾಯಿತು. ಹೀಗೆ 1 ವರ್ಷದ ಹಿಂದೆ ನಿಪಿ 2 ಮತ್ತು 3 ಕ್ಕೆ ನಿಪಿ 1 ಕ್ಕೆ ಸಹಿ ಮಾಡುವಾಗ ಸಹಿ ಮಾಡಿರುತ್ತೇನೆ. ಎಲ್ಲಿ ಸಹಿ ಮಾಡಿರುತ್ತೇನೆ ಎಂದು ಹೇಳಲು ನೆನಪಿಲ್ಲ. ಪೊಲಿಸರು ನನ್ನ ಸಮಕ್ಷಮ ಯಾವುದೇ ಮಹಜ ರ್ ಕ್ರಮ ಜರುಗಿಸಿರುವುದಿಲ್ಲ. ನಿಪಿ 2 ಮತ್ತು 3 ರಲ್ಲಿ ಏನು ಬರೆದಿದೆ ಎಂದು ನನಗೆ ನೆನಪಿಲ್ಲ. ಸಾಕ್ಷಿಗೆ 1 ಭಾವಚಿತ್ರವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದುನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಭಾವಚಿತ್ರವನ್ನು ನಿಪಿ 4 ಎಂದು ಗುರುತಿಸಲಾಯಿತು. ನಿಪಿ 4 ನ್ನು ಯಾವ ವಿಚಾರಕ್ಕಾಗಿ ತೆಗೆದಿರುತ್ತಾರೆ ನನಗೆ ನೆನಪಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಲಾಯಿತು).**

**ಪಾಟೀ ಸವಾಲು: ಮಾನ್ಯ ಎ.ಪಿ.ಪಿ. ಅವರಿಂದ**

ದಿ: 01.04.2025 ರಂದು ಸಂಜೆ 5.00 ಗಂಟೆ ಸಮಯದಲ್ಲಿ ಕೊಂಡ್ಲಹಳ್ಳಿ ಗ್ರಾಮ ಬಸ್ ನಿಲ್ದಾಣದಲ್ಲಿರುವ ಶ್ರೀನಿವಾಸ ಬೇಕರಿ ಮುಂದೆ ನನಗೂ ಮತ್ತು ಆರೋಪಿಗೂ ವಿವಾದವಾದಾಗ ಆರೋಪಿ ನನ್ನನ್ನು ಮುಂದಕ್ಕೆ ಹೋಗದಂತೆ ಅಕ್ರಮವಾಗಿ ತಡೆದು ನಿಲ್ಲಿಸಿರುತ್ತಾನೆ ಎಂಧರೆ ಸರಿಯಲ್ಲ. ಸದರಿ ಸಮಯದಲ್ಲಿ ಆರೋಪಿ ನನಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಆರೋಪಿ ಕೈಕಾಲುಗಳಿಂದ ನನ್ನ ಮೈಗೆ ಹಲ್ಲೆ ಮಾಡಿರುತ್ತಾರೆ ಎಂಧರೆ ಸರಿಯಲ್ಲ. ಈ ಬಗ್ಗೆ ನಾನು ನಿಪಿ 1 ರಂತೆ ದೂರು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ದಿ: 11.04.2025 ರಂದು ಕೊಂಡ್ಲಹಳ್ಳಿ ಗ್ರಾಮದ ಬಸ್ ನಿಲ್ದಾಣದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮ ನಾನು ಸ್ಥಳ ತೋರಿಸಿದ ಮೇರೆಗೆ ಸಂಜೆ 5.00 ರಿಂದ 5.30 ರವರೆಗೆ ನಿಪಿ 2 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಲಾಗಿರುತ್ತದೆ ಎಂಧರೆ ಸರಿಯಲ್ಲ. ನಿಪಿ 4 ಭಾವಚಿತ್ರವನ್ನು ಮಹಜರ್ ಸಮಯದಲ್ಲಿ

ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ಆರೋಪಿ ರಾಜೀ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆ ಕಾರಣದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೇ.ಸರಿ ಇದೆ.

**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**

**ಮೊಳಕಾಲ್ಮೂರು**